## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರ ಸಚಿವಾಲಯದ ಅಧೀನ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳ ಹಾಗೂ ಸಮಾನಾಂತರ ಅಧಿಕಾರಿಗಳ ನಿವಾಸದ ದೂರವಾಣಿ ವೆಚ್ಚ ಮತ್ತು ಬ್ರಾಡ್‌ಬ್ಯಾಂಡ್ ವೆಚ್ಚವನ್ನು ಮರುಪಾವತಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 213 ಡಿಟಿಎನ್ 2014, ದಿನಾಂಕ: 31-05-2016
2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 181 ಡಿಟಿಎನ್ 2016, ದಿನಾಂಕ: 16-01-2017
3) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 407 ಡಿಟಿಎನ್ 2012, ದಿನಾಂಕ: 16-04-2013

*************

**ಪ್ರಸ್ತಾವನೆ:-**

ಕರ್ನಾಟಕ ಸರ್ಕಾರ ಸಚಿವಾಲಯದ ಸರ್ಕಾರದ ಅಪರ ಕಾರ್ಯದರ್ಶಿ ಹಾಗೂ ಸಮಾನಾಂತರ ಹುದ್ದೆಯ ಅಧಿಕಾರಿಗಳ ನಿವಾಸದ ದೂರವಾಣಿ ಮತ್ತು ಬ್ರಾಡ್ ಬ್ಯಾಂಡ್‌ನ ಮಾಸಿಕ ಗರಿಷ್ಠ ವೆಚ್ಚ ರೂ.1750/-ಗಳನ್ನು ಮತ್ತು ಜಂ.ಕಾ/ಉ.ಕಾ/ಆ.ಕಾ.ಗ್ರೇಡ್-1/ ಮತ್ತು ತತ್ಸಮಾನ ಹುದ್ದೆಯ ಅಧಿಕಾರಿಗಳ ನಿವಾಸದ ದೂರವಾಣಿ ಮತ್ತು ಬ್ರಾಡ್ ಬ್ಯಾಂಡ್‌ನ ಮಾಸಿಕ ಗರಿಷ್ಠ ವೆಚ್ಚ ರೂ.1250/-ಗಳನ್ನು ಮರುಪಾವತಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಹಾಗೂ ಕರ್ನಾಟಕ ಸರ್ಕಾರ ಸಚಿವಾಲಯದ ಅಧೀನ ಕಾರ್ಯದರ್ಶಿ ಹಾಗೂ ತತ್ಸಮಾನ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ನಿವಾಸದ ದೂರವಾಣಿ ಮತ್ತು ಬ್ರಾಡ್‌ಬ್ಯಾಂಡ್‌ನ ಮಾಸಿಕ ಗರಿಷ್ಠ ವೆಚ್ಚ ರೂ.750/-ಗಳನ್ನು ಮರುಪಾವತಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ನಿವಾಸದ ದೂರವಾಣಿಗಳಿಗೆ ಯಾವುದೇ ಸೇವಾ ಸಂಸ್ಥೆಯಿಂದ ಹಾಗೂ ಇದಕ್ಕೆ ಯಾವುದೇ ಸ್ಕೀಂಗೆ ನಿಗಧಿಪಡಿಸದೆ ಬ್ರಾಡ್‌ಬ್ಯಾಂಡ್ ಸೌಲಭ್ಯ ಪಡೆಯಲು ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರಿ ಆದೇಶದಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಸದರಿ ಸೌಲಭ್ಯದಂತೆ ಇತರೆ ಹಂತದ ಅಧಿಕಾರಿಗಳಾದ ಸರ್ಕಾರದ ಅಪರ ಕಾರ್ಯದರ್ಶಿ, ಜಂಟಿ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಮತ್ತು ಅಧೀನ ಕಾರ್ಯದರ್ಶಿ ಹಾಗೂ ತತ್ಸಮಾನ ಹುದ್ದೆಯ ಅಧಿಕಾರಿಗಳಿಗೂ ವಿಸ್ತರಿಸುವ ಬಗ್ಗೆ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 61 ಡಿಟಿಎನ್ 2018, ಬೆಂಗಳೂರು,**
**ದಿನಾಂಕ: 03-06-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಅಧೀನ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳ ಹಾಗೂ ಸಮಾನಾಂತರ ಹುದ್ದೆಯ

------2

ಅಧಿಕಾರಿಗಳ ನಿವಾಸದ ದೂರವಾಣಿಗಳಿಗೆ ಪ್ರಸ್ತುತ ಚಾಲ್ತಿಯಲ್ಲಿರುವ ಆರ್ಥಿಕ ಮಿತಿಯಲ್ಲಿಯೇ ವೆಚ್ಚ ಮರುಪಾವತಿಸುವ ಷರತ್ತಿಗೊಳಪಟ್ಟು ಯಾವುದೇ ಸೇವಾ ಸಂಸ್ಥೆಯಿಂದ ಹಾಗೂ ಯಾವುದೇ ಸ್ಕೀಂಗೆ ನಿಗಧಿಪಡಿಸದೆ ಬ್ರಾಡ್‌ಬ್ಯಾಂಡ್ ಸೌಲಭ್ಯ ಪಡೆಯಲು ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಸರ್ಕಾರ ಮಂಜೂರಾತಿ ನೀಡಿದೆ.

ಈ ವೆಚ್ಚವನ್ನು ಆಯವ್ಯಯ ಲೆಕ್ಕ ಶೀರ್ಷಿಕೆ "2052-00-090-0-01-052" (ಯೋಜನೇತರ) ದೂರವಾಣಿ ವೆಚ್ಚಗಳು ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 837 ವೆಚ್ಚ-12/2018, ದಿನಾಂಕ: 10.04.2019 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೇಶವಪ್ರಸಾದ್ ಕೆ.ಹೆಚ್.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಿಆಸುಇ (ಕಾರ್ಯಕಾರಿ)

ಗೆ:

1) ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ)/(ಜಿ ಮತ್ತು ಎಸ್‌ಎಸ್‌ಎ) ಕರ್ನಾಟಕ, ಬೆಂಗಳೂರು.
2) ಖಜಾನಾಧಿಕಾರಿ, ಕರ್ನಾಟಕ ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
3) ಸರ್ಕಾರದ ಎಲ್ಲಾ ಅಪರ ಕಾರ್ಯದರ್ಶಿಗಳು/ಜಂಟಿ ಕಾರ್ಯದರ್ಶಿಗಳು/ಉಪ ಕಾರ್ಯದರ್ಶಿಗಳು/ ಪಿ.ಎಸ್.ಗ್ರೇಡ್-1 (ಉಪ ಕಾರ್ಯದರ್ಶಿ ದರ್ಜೆ)/ಅಧೀನ ಕಾರ್ಯದರ್ಶಿ/ಪಿ.ಎಸ್.ಗ್ರೇಡ್-2 (ಅಧೀನ ಕಾರ್ಯದರ್ಶಿ ದರ್ಜೆ)
4) ಅಧೀನ ಕಾರ್ಯದರ್ಶಿ (ವೆಚ್ಚ-12) ಆರ್ಥಿಕ ಇಲಾಖೆ
5) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ
8) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು
9) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
10) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು
11) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ (ಲೆಕ್ಕಪತ್ರ-1, 2 ಮತ್ತು 3)
12) ಸಂಬಂಧಪಟ್ಟವರೆಲ್ಲರಿಗೂ
13) ಕಛೇರಿ ಪ್ರತಿ
14) ಶಾಖಾ ರಕ್ಷಾ ಕಡತ
15) ಹೆಚ್ಚುವರಿ ಪ್ರತಿಗಳು